ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE

ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು | ಬಿಎಂಟಿಸಿ ಚಾಲಕನ ಮೇಲೆ ಕಲ್ಲು ತೂರಾಟ ನಡೆಸಿದ್ದವರ ಸೆರೆ

# ಕೋಡಿಹಳ್ಳಿ ಸೇರಿ 17 ಮಂದಿ ವಿರುದ್ಧ ಎಫ್‌ಐಆರ್

ಬೆಂಗಳೂರು: ಸಾರಿಗೆ ಮುಷ್ಕರ ಕಾನೂನು ಬಾಹಿರ ಎಂದು ಸರ್ಕಾರ ಘೋಷಿಸಿದರೂ ಸಂಸ್ಥೆಗಳ ನೌಕರರಿಗೆ ಪ್ರೇರೇಪಿಸಿ ಸಾಮೂಹಿಕ ಮುಷ್ಕರ ನಡೆಸುತ್ತಿರುವ ನೌಕರರ ಸಂಘದ ಗೌರವಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಸೇರಿ 17 ಮಂದಿ ವಿರುದ್ಧ ಬಿಎಂಟಿಸಿಯ ಭದ್ರತಾ ಮತ್ತು ಜಾಗೃತ ಶಾಖೆಯ ವಿಭಾಗೀಯ ಭದ್ರತಾ ನಿರೀಕ್ಷಕ ಕೆ.ಎಂ.ಮುನಿಕೃಷ್ಣ ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಈ ಸಂಬಂಧ ಸಂಘದ ಗೌರವಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್, ಅಧ್ಯಕ್ಷ ಚಂದ್ರಶೇಖರ್, ಮಹಿಳಾ ಸಿಬ್ಬಂದಿ ಚಂಪಕಾವತಿ, ಮಾಜಿ ನೌಕರ ಆನಂದ್ ಸೇರಿ 17 ಮಂದಿ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಸಾರಿಗೆ ಮುಷ್ಕರ ಕಾನೂನು ಬಾಹಿರ ಎಂದು ಸರ್ಕಾರ ಘೋಷಿಸಿದ್ದರೂ ಆರೋಪಿಗಳು ಸಾರಿಗೆ ಸಂಸ್ಥೆಗಳ ನೌಕರರನ್ನು ಪ್ರೇರೇಪಿಸಿ ಮುಷ್ಕರ ನಡೆಸುತ್ತಿದಲ್ಲದೆ, ವಾಹನಗಳ ಸಂಚಾರಕ್ಕೆ ಅಡ್ಡಿ ಉಂಟು ಮಾಡಿದ್ದಾರೆ ಎಂದು ದೂರಿನಲ್ಲಿ ಮುನಿಕೃಷ್ಣ ಆರೋಪಿಸಿದ್ದಾರೆ.

[illegible]

**ಬಂಧನ ಬಿಡುಗಡೆ:** ಮತ್ತೊಂದೆಡೆ ಸೋಮವಾರ ಸ್ವಾತಂತ್ರ್ಯ ಉದ್ಯಾನವನದಲ್ಲಿ ಉಪವಾಸ ಸತ್ಯಾಗ್ರಹ ನಡೆಸಿದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಕೂಟದ ಅಧ್ಯಕ್ಷ ಚಂದ್ರಶೇಖರ್, ಆನಂದ್ ಮತ್ತು ಇತರೆ ನೌಕರರು ಹಾಗೂ ಮುಷ್ಕರಕ್ಕೆ ಬೆಂಬಲ ನೀಡಿದ ವಂದೇ ಮಾತರಂ ಸಂಘಟನೆ ಅಧ್ಯಕ್ಷ ಶಿವ ಕುಮಾರ್ ನಾಯಕ್ ಅವರನ್ನು ಉಪ್ಪಾರಪೇಟೆ ಪೊಲೀಸರು ಬಂಧಿಸಿ, ಠಾಣಾ ಜಾಮೀನು ಪಡೆದು ಬಿಡುಗಡೆ ಮಾಡಿದ್ದಾರೆ.

**ಮತ್ತಿಬ್ಬರ ಬಂಧನ:** ಸಾರಿಗೆ ಮುಷ್ಕರಕ್ಕೆ ಸೆಡ್ಡು ಹೊಡೆದು ಬಸ್ ಚಾಲನೆ ಮಾಡಿದಕ್ಕೆ ಬಿಎಂಟಿಸಿ ಬಸ್ ಚಾಲಕನ ಮೇಲೆ ಕಲ್ಲು ತೂರಾಟ ನಡೆಸಿ ಪರಾರಿಯಾಗಿದ್ದ ಮತ್ತಿಬ್ಬರು ನೌಕರರನ್ನು ಕಾಮಾಕ್ಷಿಪಾಳ್ಯ ಪೊಲೀಸರು ಬಂಧಿಸಿದ್ದಾರೆ.

ಆಂಧ್ರಹಳ್ಳಿ ಬಿಎಂಟಿಸಿ ಡಿಪೋ ನಂಬರ್ 9ರ ಚಾಲಕ ಹಾಗೂ ನಿರ್ವಾಹಕ ತಿಮ್ಮೇಗೌಡ (42), ಹೆಗ್ಗನಹಳ್ಳಿ ಕ್ರಾಸ್‌ನ ಜೀವನ್ (33) ಬಂಧಿತರು. ಭಾನುವಾರ ಡಿಪೋ 9ರ ಚಾಲಕ ಸೀತೇಗೌಡ ಎಂಬವರನ್ನು ಬಂಧಿಸಲಾಗಿದೆ. ಆರೋಪಿಗಳು ಭಾನುವಾರ ಸಂಜೆ ಡಿಪೋ 22ರ ಬಸ್ ಚಾಲಕ ನಂಜುಂಡೇಗೌಡ (44) ಎಂಬವರ ಮೇಲೆ ಕಲ್ಲು ತೂರಾಟ ನಡೆಸಿ ಗಾಯಗೊಳಿಸಿದ್ದರು. ಚಾಲಕ ನಂಜುಂಡೇಗೌಡ ಅವರು ಕೆ.ಆರ್.ಮಾರುಕಟ್ಟೆಟು ಜಾಲಹಳ್ಳಿ ಮಾರ್ಗದ ಬಸ್ ಚಾಲನೆ ಮಾಡುತ್ತಾರೆ. ಭಾನುವಾರ ಸಂಜೆ ನಾಲ್ಕು ಗಂಟೆ ಸುಮಾರಿಗೆ ಕೆ.ಆರ್.ಮಾರುಕಟ್ಟೆಯಿಂದ ಜಾಲಹಳ್ಳಿಗೆ ಕಾಮಾಕ್ಷಿಪಾಳ್ಯದ ವಿಘ್ನೇಶ್ವರ ನಗರದ ಮಾರ್ಗವಾಗಿ ಹೋಗುತ್ತಿದ್ದರು. ಈ ವೇಳೆ ಮೂವರು ಆರೋಪಿಗಳು ಬಸ್ ಅನ್ನು ಅಡ್ಡಗಟ್ಟಿ ಏಕಾಏಕಿ ಚಾಲಕನ ಮೇಲೆ ಕಲ್ಲು ತೂರಾಟ ನಡೆಸಿ ಪರಾರಿಯಾಗಿದ್ದರು. ಪರಿಣಾಮ ನಂಜುಂಡೇಗೌಡ ಅವರ ತಲೆಗೆ ಗಂಭೀರ ಗಾಯವಾಗಿತ್ತು. ಕೂಡಲೇ ಸ್ಥಳೀಯರು ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿದ್ದರು. ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬಸ್‌ನ ಗಾಜು ಪುಡಿಯಾಗಿತ್ತು. ಪ್ರಕರಣ ದಾಖಲಿಸಿಕೊಂಡ ಕಾಮಾಕ್ಷಿಪಾಳ್ಯ ಪೊಲೀಸರು ಸಿಸಿ ಕ್ಯಾಮೆರಾ ಪರಿಶೀಲಿಸಿ ಮೂವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.